# ಕನ್ನಡ ಪೋಸ್ಟ್

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 40 | Pages. 2 | Date: 08-01-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 40 - ಪುಟಗಳು : 2 | 08-01-2026 | ಗುರುವಾರ | Ph: 8762954248 | ದರ : ₹1


# ಅರಸೀಕೆರೆಯಿಂದ ಸ್ಪರ್ಧೆ ಮಾಡಿ

## ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರಿಗೆ ಸ್ಥಳೀಯ ಮುಖಂಡರ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಮಾಜಿ ಸಚಿವ ಹಾಗೂ ಹೊಳೆನರಸೀಪುರ ಹಾಲಿ ಶಾಸಕ ಹೆಚ್.ಡಿ.ರೇವಣ್ಣ ಅವರು ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಅರಸೀಕೆರೆಯಿಂದ ಸ್ಪರ್ಧೆ ಮಾಡಬೇಕು ಎಂಬ ಒತ್ತಡ ಕೇಳಿ ಬಂದಿದೆ.

ಈ ಸಂಬಂಧ ತಾಲೂಕಿನ ಹಲವು ಜೆಡಿಎಸ್ ಮುಖಂಡರು, ಮೊನ್ನೆಯಷ್ಟೇ ರೇವಣ್ಣ ಅವರನ್ನು ಮುಖಾಮುಖಿ ಭೇಟಿ ಮಾಡಿ, ಹೇಳಿ ಕೇಳಿ ಹಿಂದಿನಿಂದಲೂ ಅರಸೀಕೆರೆ ಜೆಡಿಎಸ್ ಭದ್ರಕೋಟೆ, ಹಾಗಾಗಿ ನೀವು ಮುಂದಿನ ಎಲೆಕ್ಷನ್‌ನಲ್ಲಿ ಇಲ್ಲಿಂದಲೇ ಸ್ಪರ್ಧೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

ನಿಯೋಗದಲ್ಲಿ ಜಿಪಂ ಮಾಜಿ ಸದಸ್ಯ ಬಾಣಾವರ ಅಶೋಕ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಹೊಸೂರು ಗಂಗಾಧರ್, ಜನತಾ ಬಜಾರ್ ಅಧ್ಯಕ್ಷ ಗಂಡಸಿ ಮಂಜುನಾಥ್, ಕರ್ನಾಟಕ ಪ್ರದೇಶ ಕುರುಬರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಸ್ಥಳೀಯ ಜೆಡಿಎಸ್ ಮುಖಂಡ ಹರ್ಷವರ್ಧನ್ ಮೊದಲಾದವರು ಇದ್ದರು.

ಹಿಂದೆ ಜೆಡಿಎಸ್‌ನಿಂದ ಮೂರು ಬಾರಿ ಗೆದ್ದಿದ್ದ ಶಿವಲಿಂಗೇಗೌಡರು ಈಗ ಕಾಂಗ್ರೆಸ್‌ನಿಂದ ಗೆದ್ದು, ಜಿಲ್ಲೆಯಲ್ಲಿ ಎಲ್ಲವೂ ನನ್ನಿಂದಲೇ ನಡೆಯುತ್ತಿದೆ. ಜಿಲ್ಲೆಯಲ್ಲಿ ಜೆಡಿಎಸ್ ಮುಗಿಸುತ್ತೇವೆ ಎಂದೆಲ್ಲ ರಾಜ್ಯ ನಾಯಕರ ಎದುರು ಬೊಗಳೆ ಬಿಡುತ್ತಿದ್ದಾರೆ.

ಮುಂದಿನ ಚುನಾವಣೆಯಲ್ಲಿ ಅವರನ್ನೇ ಸೋಲಿಸಿದರೆ ಮುಖ್ಯವಾಗಿ ಹಾಸನ ಜಿಲ್ಲೆ ಕಾಂಗ್ರೆಸ್ ಮುಕ್ತವಾಗಲಿದೆ. ರಾಜ್ಯ ಕಾಂಗ್ರೆಸ್ ನಾಯಕರು ಜಿಲ್ಲೆಯಲ್ಲಿ ಅಥವಾ ಅರಸೀಕೆರೆಯಲ್ಲಿ ಮೀಟಿಂಗ್ ಮಾಡುವುದು ತಪ್ಪಲಿದೆ.

ಇದೆಲ್ಲ ಸಾಧ್ಯವಾಗುವುದು ನೀವು ಸ್ಪರ್ಧೆ ಮಾಡುವುದರಿಂದ ಮತ್ತು



ಗೆಲ್ಲುವುದರಿಂದ, ಹಾಗಾಗಿ ನೀವು ಅರಸೀಕೆರೆ ವಿಧಾನಸಭಾ ಕ್ಷೇತ್ರದಿಂದ ಕಣಕ್ಕಿಳಿಯಬೇಕು ಎಂಬುದು ತಾಲೂಕಿನ ಜನರ ಅಪೇಕ್ಷೆಯೂ ಆಗಿದೆ ಎಂಬುದನ್ನು ರೇವಣ್ಣ ಅವರ ಮುಂದೆ ಮುಖಂಡರು ಒಕ್ಕೊರಲ ಮನವಿ ಇಟ್ಟಿದ್ದಾರೆ.

ಅರಸೀಕೆರೆಯಲ್ಲಿ ಈವರೆಗೆ ಏನೆಲ್ಲಾ ಅಭಿವೃದ್ಧಿ ಕೆಲಸ ಆಗಿವೆ,ಅದಕ್ಕೆ ಕಾರಣ ಜೆಡಿಎಸ್ ಪಕ್ಷ ಹಾಗೂ ನೀವು, ಹಿರಿಯರಾದ ಹೆಚ್.ಡಿ.ದೇವೇಗೌಡರು, ಮಾಜಿ ಸಿಎಂ ಕುಮಾರಣ್ಣ ಅವರು. ಆದರೂ ಕೃತಜ್ಞತೆ ಸ್ಮರಿಸದ ಶಿವಲಿಂಗೇಗೌಡರು, ಎಲ್ಲವೂ ನನ್ನಿಂದಲೇ ಆಗಿದ್ದು, ನಾನೇ ಭಗೀರಥ ಎಂದು ಬಿಂಬಿಸಿಕೊಳ್ಳುತ್ತಿದ್ದಾರೆ. ಈ ಅಹಂಗೆ ಕಡಿವಾಣ ಬೀಳಬೇಕು. ಅದು ಸಾಧ್ಯವಾಗುವುದು ನೀವು ಅರಸೀಕೆರೆಯಿಂದ ಸ್ಪರ್ಧೆ ಮಾಡುವುದರಿಂದ ಎಂದು ಮುಖಂಡರು ರೇವಣ್ಣ ಅವರಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ.

ಇದಕ್ಕೆ ರೇವಣ್ಣ ಅವರೂ ಪೂರಕವಾಗಿ ಸ್ಪಂದಿಸಿದ್ದಾರೆ ಎಂದು ಮುಖಂಡರು ತಿಳಿಸಿದ್ದು, ಮುಂದಿನ ದಿನಗಳಲ್ಲಿ ಯಾವ ನಿರ್ಧಾರ ಹೊರ ಬೀಳಿದೆ ಎಂಬುದು ಸಹಜವಾಗಿಯೇ ಕುತೂಹಲ ಮೂಡಿಸಿದೆ.

> ರೇವಣ್ಣ ಅವರು ನಮ್ಮ ನಾಯಕರು, ಅವರು ಅರಸೀಕೆರೆಯಿಂದ ಸ್ಪರ್ಧೆ ಮಾಡಬೇಕು ಎಂಬುದು ನಮ್ಮ ಒತ್ತಾಯ,ಅದಕ್ಕಾಗಿ ಅವರನ್ನು ಖುದ್ದು ಭೇಟಿ ಮಾಡಿ ಮನವಿ ಮಾಡಿದ್ದೇವೆ. ಅಂತಿಮ ತೀರ್ಮಾನ ಕೈಗೊಳ್ಳುವುದು ಅವರಿಗೆ ಬಿಟ್ಟ ವಿಚಾರ. ರೇವಣ್ಣ ಅವರು ಬಂದರೆ, ಗೆಲುವಿಗೆ ಹಾಗೂ ಪಕ್ಷ ಸಂಘಟನೆಗೆ ಅನುಕೂಲ ಆಗಲಿದೆ.
>
> **- ಕೇಶವಮೂರ್ತಿ, ಜೆಡಿಎಸ್ ಮುಖಂಡ**

### ಹೃದಯಪೂರ್ವಕ ಸ್ವಾಗತ

ರೇವಣ್ಣ ಅರಸೀಕೆರೆಯಿಂದ ಸ್ಪರ್ಧೆ ವಿಚಾರ, ತಾಲೂಕಿನಾದ್ಯಂತ ಸಾಕಷ್ಟು ಚರ್ಚಿತ ವಿಷಯವಾಗಿದೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ಕಳೆದ ಚುನಾವಣೆಯ ಪರಾಜಿತ ಅಭ್ಯರ್ಥಿ ಎನ್.ಆರ್.ಸಂತೋಷ್, ರೇವಣ್ಣ ಅವರು ನಮ್ಮ ನಾಯಕರು, ಅವರು ಅರಸೀಕೆರೆ ಕ್ಷೇತ್ರದಿಂದ ಸ್ಪರ್ಧೆ ಮಾಡುವುದಕ್ಕೆ ನನ್ನ ಸಂಪೂರ್ಣ ಸಹಕಾರ ಜೊತೆಗೆ ಹೃದಯಪೂರ್ವಕವಾಗಿ ಸ್ವಾಗತ ಮಾಡುವೆ ಎಂದರು.

## ಅಸ್ವಸ್ಥಗೊಂಡಿದ್ದ ಮಹಿಳೆ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ನೇಣು ಬಿಗಿದಿದ್ದ ಪತಿರಾಯ

ಹಾಸನ: ಕುಡಿದ ಅಮಲಿನಲ್ಲಿ ಪತಿಯೇ ಪತ್ನಿಯ ನೇಣು ಬಿಗಿದು ಕೊಲೆಗೆ ಯತ್ನ ಮಾಡಿದ್ದ ಆರೋಪ ಹಿನ್ನೆಲೆ ತೀವ್ರ ಅಸ್ವಸ್ಥಗೊಂಡು ಹಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮಹಿಳೆ ಸಾವನ್ನಪ್ಪಿದ್ದಾರೆ.

ಮೂಲತಃ ತುಮಕೂರು ಜಿಲ್ಲೆ ತಿಪಟೂರಿನ ರೂಹಿನಾ (28) ಮೃತರು. 10 ವರ್ಷಗಳ ಹಿಂದೆ ರೂಹಿನಾ ಹಾಗೂ ತುಮಕೂರು ಜಿಲ್ಲೆ ಕುನ್ನಾಲ್ ಗ್ರಾಮದ ಚಾಂದ್ ಪಾಷ ಎಂಬುವರು ಮದುವೆ ಆಗಿದ್ದರು. ಮದುವೆ ಬಳಿಕ ತಿಪಟೂರಿನ ಶಾಂತಿನಗರದಲ್ಲಿ ದಂಪತಿ ವಾಸವಾಗಿದ್ದರು.

ಆದರೆ ಪಾಷ, ಕುಡಿತದ ಚಟಕ್ಕೆ ದಾಸನಾಗಿದ್ದ.ಹಣ ತರುವಂತೆ ಆಗಾಗ್ಗೆ ಪತ್ನಿಗೆ ಕಿರುಕುಳ ನೀಡುತ್ತಿದ್ದ. ಕಳೆದ ಡಿ.31 ರಂದು ಕುಡಿದು ಬಂದು ಪತ್ನಿ ಕುತ್ತಿಗೆ ಬಿಗಿದು ಕೊಲ್ಲಲು ಪ್ರಯತ್ನ ಮಾಡಿದ್ದ. ಅಸ್ವಸ್ಥಗೊಂಡಿದ್ದ ಮಹಿಳೆಯನ್ನ ಡಿ.31 ರಂದು ಹಿಮ್ಸ್ ಆಸ್ಪತ್ರೆಗೆ ಪೋಷಕರು ದಾಖಲು ಮಾಡಿದ್ದರು.

ಆದರೆ ಚಿಕಿತ್ಸೆ ಫಲಕಾರಿಯಾಗದೆ ಮಹಿಳೆ ಮೃತಪಟ್ಟಿದ್ದಾರೆ. ಹಿಮ್ಸ್‌ನಲ್ಲಿ ಮರಣೋತ್ತರ ಪರೀಕ್ಷೆ ನಂತರ ಪೋಷಕರು ಮೃತದೇಹ ಕೊಂಡೊಯ್ದರು. ಮಗಳ ಸಾವಿಗೆ ಕಾರಣನಾಗಿರುವ ಆರೋಪಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಮೃತಳ ಪೋಷಕರು ಆಗ್ರಹಿಸಿದ್ದಾರೆ.

ತಿಪಟೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹೊಳೆನರಸೀಪುರದಲ್ಲಿ ಕಾಂಗ್ರೆಸ್ ಸಂಭ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ರಾಜ್ಯದ ಮುಖ್ಯಮಂತ್ರಿಯಾಗಿ ಸುದೀರ್ಘ ಆಡಳಿತ ನಡೆಸಿದ ನಾಯಕ ಎಂಬ ದಾಖಲೆ ಬರೆದ ಸಿದ್ದರಾಮಯ್ಯ ಅವರ ಯಶಸ್ವಿ ಆಡಳಿತ ಹಿನ್ನೆಲೆ ಪಟ್ಟಣದಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ಸಂಸದ ಶ್ರೇಯಸ್ ಎಂ. ಪಟೇಲ್ ಮತ್ತು ಕೆ.ಪಿ.ಸಿ.ಸಿ. ಸದಸ್ಯರಾದ ಅನುಪಮಾ ಮಹೇಶ್ ಅವರ ಮಾರ್ಗದರ್ಶನದಲ್ಲಿ ಶ್ರೀ ಜಯಚಾಮರಾಜೇಂದ್ರ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದ ಮಹಾತ್ಮರ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಿ ಸಿಹಿ ವಿತರಿಸಿ, ಪಟಾಕಿ ಸಿಡಿಸಿ ಸಂಭ್ರಮಾಚರನೆ ಮಾಡಲಾಯಿತು.

ಹಾಗೆಯೇ ಸರ್ಕಾರಿ ಆಸ್ಪತ್ರೆಯ ಒಳರೋಗಿಗಳಿಗೆ ಹಣ್ಣು ಹಂಪಲು ಬ್ರೆಡ್ ವಿತರಿಸಿ ವಿಜಯೋತ್ಸವ ಆಚರಿಸಿದರು.



ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಟಿ.ಲಕ್ಷ್ಮಣ ಮಾತನಾಡಿ, ಅನ್ನರಾಮಯ್ಯ, ಗ್ಯಾರಂಟಿ ರಾಮಯ್ಯ ಎಂದೇ ಮನೆ ಮಾತಾಗಿರುವ ಸಿದ್ದರಾಮಯ್ಯ ಅವರು ಚುನಾವಣಾ ಪೂರ್ವದಲ್ಲಿ ಕೊಟ್ಟ ಭರವಸೆ ಈಡೇರಿಸುವುದರ ಮೂಲಕ ರಾಜ್ಯದ ಕೋಟ್ಯಂತರ ಕುಟುಂಬಗಳಿಗೆ ಗ್ಯಾರಂಟಿ ಯೋಜನೆಗಳ ಪ್ರಯೋಜನ ನೇರವಾಗಿ ದೊರಕುವಂತೆ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ ಎಂದರು.

ಆ ಮೂಲಕ ಪ್ರತಿ ತಿಂಗಳು ಪ್ರತಿ ಕುಟುಂಬಕ್ಕೆ ಕನಿಷ್ಠ 4-5 ಸಾವಿರ ರೂಪಾಯಿ ಸವಲತ್ತು ದೊರೆಯುವಂತೆ ಮಾಡಿದ್ದಾರೆ. ಇದಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಅವರ ಸಚಿವ ಸಂಪುಟದ ನಾಯಕರು ಕಾರಣ ಎಂದರು.

## ಜ.11 ರಂದು ಒಲಂಪಿಯಾಡ್ ಪರೀಕ್ಷೆ

### ಟೈಮ್ಸ್ ಗಂಗಾಧರ್ ಮಾಹಿತಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: 2025-26ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯ, ಸಿಬಿಎಸ್‌ಇ, ಐಸಿಎಸ್‌ಇ ಪಠ್ಯಕ್ರಮದಲ್ಲಿ ಎಸ್ಸೆಸ್ಸೆಲ್ಸಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಟೈಮ್ಸ್ ಒಲಂಪಿಯಾಡ್ ಪರೀಕ್ಷೆಯನ್ನು ಜ.11 ರಂದು ಆಯೋಜಿಸಲಾಗುತ್ತಿದೆ ಎಂದು ಟೈಮ್ಸ್ ಸಮೂಹ ವಿದ್ಯಾ ಸಂಸ್ಥೆಗಳ ಕಾರ್ಯದರ್ಶಿ ಬಿ.ಕೆ.ಗಂಗಾಧರ್ ತಿಳಿಸಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪಟ್ಟಣದ ಟೈಮ್ಸ್ ಪಿಯು ಕಾಲೇಜು ಗುಣಮಟ್ಟದ ಶಿಕ್ಷಣ ನೀಡುವುದರೊಂದಿಗೆ ವಿದ್ಯಾರ್ಥಿಗಳಲ್ಲಿ ವಿಮರ್ಶಾತ್ಮಕ ಚಿಂತನೆ, ಸಮಸ್ಯೆ ಪರಿಹಾರದ ಕೌಶಲ್ಯ ಮತ್ತು ಸೃಜನಶೀಲತೆ ಬೆಳೆಸಿ, ಸಾಮಾಜಿಕ ಜವಾಬ್ದಾರಿ ಕಲಿಸುದರೊಂದಿಗೆ 12ನೇ ವರ್ಷ ಪೂರೈಸಿದ್ದು, ಕಳೆದ 2 ವರ್ಷಗಳಿಂದ ಯಶಸ್ವಿಯಾಗಿ ಟೈಮ್ಸ್ ಒಲಂಪಿಯಾಡ್ ಪರೀಕ್ಷೆ ನಡೆಸುತ್ತಿದ್ದು, ತಾಲ್ಲೂಕಿನ ಪ್ರತಿಭಾನ್ವಿತ ವಿದ್ಯಾರ್ಥಿಗಳ ಅನುಕೂಲಕ್ಕಾಗಿ, ಟೈಮ್ಸ್ ಸಮೂಹ ಶಿಕ್ಷಣ ಸಂಸ್ಥೆಗಳ ವತಿಯಿಂದ ಕೊಡುಗೆ ನೀಡುವ ಉದ್ದೇಶದಿಂದ ಒಲಂಪಿಯಾಡ್ ಪರೀಕ್ಷೆ ನಡೆಸಲಾಗುತ್ತಿದೆ ಎಂದರು.

10ನೇ ತರಗತಿ ಪಠ್ಯಕ್ಕೆ ಸಂಬಂಧಿಸಿದಂತೆ ಗಣಿತ ವಿಷಯದಲ್ಲಿ 20 ಅಂಕ, ವಿಜ್ಞಾನದಲ್ಲಿ 30 ಅಂಕ ಹಾಗೂ ಇಂಗ್ಲಿಷ್ ವಿಷಯಕ್ಕೆ 10 ಅಂಕ ನಿಗದಿಪಡಿಸಲಾಗಿದೆ. ಒಟ್ಟು 60 ಅಂಕಗಳಿಗೆ ಪರೀಕ್ಷೆ ನಡೆಸಲಾಗುತ್ತದೆ. ಗಣಿತ ಮತ್ತು ವಿಜ್ಞಾನ ವಿಷಯಕ್ಕೆ ಬಹು ಆಯ್ಕೆ ಪ್ರಶ್ನೆ ಇರಲಿದ್ದು, ಇಂಗ್ಲಿಷ್ ಭಾಷೆಗೆ 10 ಅಂಕಗಳಿಗೆ ಥಿಯರಿ ಮಾದರಿ ಉತ್ತರ ಬರೆಯಬೇಕು. ಮೂರು ಮಾದರಿ ಪ್ರಶ್ನೆ ಪತ್ರಿಕೆಗಳನ್ನು ತಯಾರಿಸಲಾಗಿದೆ ಎಂದರು.

ಚನ್ನರಾಯಪಟ್ಟಣ, ಶ್ರವಣಬೆಳಗೊಳ, ಕೆ.ಆರ್.ಪೇಟೆ, ಕಿಕ್ಕೇರಿ, ಹಿರೀಸಾವೆ, ಬಾಗೂರು, ಪಟ್ಟಣದ ಹೊಸ ಬಸ್ ನಿಲ್ದಾಣದಿಂದ ಶಿಕ್ಷಣ ಸಂಸ್ಥೆಯ ಬಸ್‌ಗಳಲ್ಲಿ ವಿದ್ಯಾರ್ಥಿಗಳನ್ನು ಉಚಿತವಾಗಿ ಕರೆತರಲಾಗುವುದು.

ಜ.11ರ ಭಾನುವಾರ ಬೆಳಿಗ್ಗೆ 10 ಮತ್ತು 11.30 ಗಂಟೆಗೆ 2 ಅವಧಿಯಲ್ಲಿ ಪರೀಕ್ಷೆ ನಡೆಸಲಾಗುವುದು. ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ 10 ವಿದ್ಯಾರ್ಥಿಗಳಿಗೆ ನಮ್ಮ ಕಾಲೇಜಿನಲ್ಲಿನ ದಾಖಲಾತಿಗೆ ಪ್ರಥಮ ಮತ್ತು ದ್ವಿತೀಯ ಪಿಯು ವಿಭಾಗದಲ್ಲಿ ಶೇ.50 ರಷ್ಟು ವಿದ್ಯಾರ್ಥಿ ವೇತನ ಪಡೆಯಲಿದ್ದಾರೆ.

ಇದರಲ್ಲಿ ಕೆಸಿಇಟಿ, ನೀಟ್, ಜೆಇಇ ತರಬೇತಿ ನೀಡಲಾಗುವುದು. ವಿದ್ಯಾರ್ಥಿಗಳು ಜ.8 ರೊಳಗೆ ವಾಟ್ಸ್ ಪ್ ಮೂಲಕ ಹೆಸರು ನೊಂದಾಯಿಸಿ ಕೊಳ್ಳಬೇಕು. ಪರೀಕ್ಷೆ ನೋಂದಣಿ ಉಚಿತ. ಆಸಕ್ತರು 9731338083, 9901317067 ಮತ್ತು 6363872009 ವಾಟ್ಸಾಪ್ ನಂಬರಿನಲ್ಲಿ ನೋಂದಾಯಿಸಬಹುದು ಎಂದರು.

## ಜ.16ಕ್ಕೆ ಕಾಫಿ ಸಂಸ್ಕೃತಿ-2 ಕೃಷಿ ಸಮಾವೇಶ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭಾರತೀಯ ಕಾಫಿ ಉತ್ಪಾದನೆಯ ಪರಂಪರೆಯನ್ನು ಜಾಗತಿಕ ಮಟ್ಟದಲ್ಲಿ ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಎಂಟು ಮಂದಿ ಸಮಾನ ಮನಸ್ಕರು ಸೇರಿ ಸ್ಥಾಪಿಸಿರುವ 7 ಬೀನ್ ಟೀಂ ಸಂಸ್ಥೆ ವತಿಯಿಂದ ಸಕಲೇಶಪುರದ ಒಕ್ಕಲಿಗರ ಸಮುದಾಯ ಭವನದಲ್ಲಿ ಕಾಫಿ ಸಂಸ್ಕೃತಿ-2 ಕೃಷಿ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಟೀಂ ಅಧ್ಯಕ್ಷ ಡಾ.ಎನ್.ಕೆ.ಪ್ರದೀಪ್ ತಿಳಿಸಿದರು.

ಇಂದು ಸುದ್ದಿಗೋಷ್ಟಿಯಲ್ಲಿ ಈ ವಿಷಯ ತಿಳಿಸಿದ ಅವರು, ಜ.16 ರಂದು ಬೆಳಗ್ಗೆ ಸಮಾವೇಶ ಶುರುವಾಗಲಿದೆ. ವಿಷಮುಕ್ತ ಉತ್ಪಾದನೆ, ಸುಸ್ಥಿರ ಕೃಷಿ, ನಿಖರ ಕೃಷಿ ಪದ್ಧತಿ, ಮರಗಳ ಸಂರಕ್ಷಣೆ, ವಿಜ್ಞಾನಾಧಾರಿತ ಕೃಷಿ ಹಾಗೂ ಯುವಕರನ್ನು ಕೃಷಿಯತ್ತ ಮರು ಆಕರ್ಷಿಸುವುದು 7 ಬೀನ್ ಟೀಮ್‌ನ ಪ್ರಮುಖ ಗುರಿಗಳಾಗಿವೆ ಎಂದರು.

ಹವಾಮಾನ ಬದಲಾವಣೆಯಿಂದ ಉಂಟಾಗುತ್ತಿರುವ ಸವಾಲುಗಳನ್ನು ಎದುರಿಸಲು ಬೆಳೆಗಾರರಿಗೆ ವೈಜ್ಞಾನಿಕ ಮಾರ್ಗದರ್ಶನ ನೀಡಲಾಗುತ್ತಿದೆ. ವರ್ಷಕ್ಕೆ 12 ತರಗತಿಗಳನ್ನು ವಿವಿಧ ಪ್ರಗತಿಪರ ಬೆಳೆಗಾರರ ತೋಟಗಳಲ್ಲಿ ನಡೆಸಲಾಗುತ್ತಿದೆ. ಬೆಳೆಗಾರರಿಗೆ ವೈಜ್ಞಾನಿಕ ತಿಳುವಳಿಕೆ ನೀಡಿ,ಹಾಲಿ 4 ಲಕ್ಷ ಕಾಫಿಯನ್ನು ರಫ್ತು ಮಾಡಲಾಗುತ್ತಿದೆ. ಇದು 7 ಲಕ್ಷ ಮೆಟ್ರಿಕ್ ಟನ್‌ಗೆ ಏರಬೇಕು ಎಂಬುದು ನಮ್ಮ ಉದ್ದೇಶ ಎಂದರು. ಹಾಸನ, ಕೊಡಗು, ಚಿಕ್ಕಮಂಗಳೂರು ಸೇರಿದಂತೆ ಕರ್ನಾಟಕದ ಹಲವು ಜಿಲ್ಲೆಗಳು ಹಾಗೂ ತಮಿಳುನಾಡಿನ ನೀಲಗಿರೀಸ್‌ನಿಂದ ಬೆಳೆಗಾರರು ಭಾಗವಹಿಸುತ್ತಿದ್ದಾರೆ. ವರ್ಷದ ಕೊನೆಯಲ್ಲಿ ಉತ್ತಮ ಕೃಷಿಕರಿಗೆ ಉತ್ತಮ 7 ಬೀನ್ ಕೃಷಿಕ ಪ್ರಮಾಣಪತ್ರ ನೀಡಲಾಗುವುದು ಎಂದರು.

ಹಾಸನ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಕಾರ್ಯಕ್ರಮ ಉದ್ಘಾಟಿಸುವರು. ಕಾಫಿ ಮಂಡಳಿ ಕಾರ್ಯದರ್ಶೀ ಕೂರ್ಮರಾವ್, ಕಾಫಿ ಮಂಡಳಿ ಚೇರ್‌ಮನ್ ಎಂ.ಜೆ. ದಿನೇಶ್, ಡಾ.ವೇಣುಗೋಪಾಲ್, ಕು.ಸುನಾಲಿನಿ ಮೆನನ್, ಡಿ.ಎಂ.ಪೂರ್ಣೇಶ್. ಡಾ.ಧರ್ಮರಾಜ್ ಮೊದಲಾದವರು ವಿವಿಧ ವಿಷಯಗಳ ಮೇಲೆ ಮಾತನಾಡಲಿದ್ದಾರೆ ಎಂದು ತಿಳಿಸಿದರು.

ಹಿರಿಯರು ಹಾಗೂ ಖ್ಯಾತ ವಿಜ್ಞಾನಿಗಳು ಜಾಗತಿಕ ಕಾಫಿ, ಗುಣಮಟ್ಟ, ಮೌಲ್ಯವರ್ಧನೆ ಮತ್ತು ಸುಸ್ಥಿರತೆ ಕುರಿತು ಉಪನ್ಯಾಸ ನೀಡಲಿದ್ದಾರೆ. ಮಧ್ಯಾಹ್ನದ ನಂತರ 7 ಬೀನ್ ಟೀಂ ಮೂರನೇ ಬ್ಯಾಚ್ ತರಗತಿಗೆ ಚಾಲನೆ ನೀಡಲಾಗುತ್ತದೆ ಎಂದರು. ಸುದ್ದಿಗೋಷ್ಟಿಯಲ್ಲಿ ಸಂಸ್ಥೆಯ ಪದಾಧಿಕಾರಿಗಳಾದ ಮುರುಳೀಧರ್ ಎಸ್. ಬಕ್ಕರವಳ್ಳಿ, ತೀರ್ಥಮಲ್ಲೇಶ್, ಮಹೇಶ್, ಕೆ.ಎನ್. ಸುಬ್ರಹ್ಮಣ್ಯ ಇದ್ದರು.

## ವ್ಯಕ್ತಿಯ ಮೇಲೆ ಇನ್ಸ್‌ಪೆಕ್ಟರ್ ಹಲ್ಲೆ

### ಹಣಕಾಸು ವಿಚಾರಕ್ಕೆ ಎರಡು ಕಾಲು ಮುರಿದಿರುವ ಶಿವಕುಮಾರ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಬೆಂಗಳೂರಿನ ವಿವೇಕನಗರ ಠಾಣೆ ಪೊಲೀಸ್ ಇನ್ಸ್‌ಪೆಕ್ಟರ್ ಆಗಿದ್ದ ಶಿವಕುಮಾರ್ ಎಂಬುವರು, ವ್ಯಕ್ತಿಯೊಬ್ಬರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ ಎಂಬ ಗಂಭೀರ ಆರೋಪ ಕೇಳಿ ಬಂದಿದೆ.

ತಾಲ್ಲೂಕಿನ ಕಾರ್ಲೆ ಕೊಪ್ಪಲು ಗ್ರಾಮದ ಶಶಿಧರ್ ಮೇಲೆ ಎರಡು ಕಾಲು ಮುರಿದು ತಲೆ ಭಾಗ, ಮೈ ಕೈಗೆ ಗಾಯವಾಗುವ ರೀತಿಯಲ್ಲಿ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ.

ಮಂಗಳವಾರ ಸಂಜೆ ಬೆಂಗಳೂರಿನಿಂದ ಇನ್ನೋವಾ ಕಾರಿನಲ್ಲಿ ಬಂದ ಶಿವಕುಮಾರ್ ಹಾಗೂ ಇತರರು, ಗೊರೂರು ಸಮೀಪದ ಉಳುವಾರೆ ಗ್ರಾಮದ ಬಳಿ ಶಶಿಧರ್ ಮೇಲೆ ಅಟ್ಯಾಕ್ ಮಾಡಿದ್ದಾರೆ.

ಕಬ್ಬಿಣದ ರಾಡ್‌ನಿಂದ ಮನಸೋ ಇಚ್ಛೆ ಹಲ್ಲೆ ಮಾಡಿದ್ದಾರೆ. ಹಲ್ಲೆಯಿಂದ ಎರಡು ಕಾಲು ಮುರಿದಿದ್ದು, ಹದಿನೈದು ಹೊಲಿಗೆ ಹಾಕಲಾಗಿದೆ. ಶಶಿಧರ್, ಸದ್ಯ ನಗರದ ಹಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಅಲ್ಲದೆ ಬಲಕಣ್ಣಿಗೂ ಗಂಭೀರ ಗಾಯವಾಗಿದೆ ಎಂದು ಶಶಿ ಹಾಗೂ ಕುಟುಂಬ ಸದಸ್ಯರು ಆರೋಪಿಸಿದ್ದಾರೆ.

ಏಳೆಂಟು ವರ್ಷಗಳ ಹಿಂದೆ ಹಾಸನದಲ್ಲಿಯೇ ಶಿವಕುಮಾರ್ ಇನ್ಸ್‌ಪೆಕ್ಟರ್ ಆಗಿದ್ದರು. ಶಿವಕುಮಾರ್ ಮತ್ತು ಶಶಿ ನಡುವೆ ಹಣಕಾಸು ವ್ಯವಹಾರ ಇತ್ತು ಎನ್ನಲಾಗಿದೆ. ಶಶಿ ಹೆಸರಿನಲ್ಲಿ ಆಸ್ತಿ ಖರೀದಿ ಮಾಡಲು ಶಿವಕುಮಾರ್ 50 ಲಕ್ಷ ಹಣ ಕೊಟ್ಟಿದ್ದರು. ಆದರೆ ಸರಿಯಾದ ಭೂಮಿ ಖರೀದಿಕೆ ಹೊಂದಿಕೆ ಆಗದ ಹಿನ್ನೆಲೆಯಲ್ಲಿ 20 ಲಕ್ಷ ಹಣವನ್ನು ಶಶಿ ವಾಪಸ್ ಕೊಟ್ಟಿದ್ದರು.

ಉಳಿದ 10 ಲಕ್ಷ ಹಣಕ್ಕಾಗಿ ಚೆಕ್ ಕೇಸ್ ಹಾಕಿದ್ದ ಶಿವಕುಮಾರ್, 10 ಲಕ್ಷ ಹಣದ ಬದಲು 26.5 ಲಕ್ಷಕ್ಕೆ ಕೇಸ್ ಹಾಕಿದ್ದಾರೆ. ಈ ಬಗ್ಗೆ ವಿಚಾರಣೆ ನಡೆಯುತ್ತಿದೆ. ಈ ನಡುವೆ ಶಿವಕುಮಾರ್ ಏಕಾಏಕಿ ಬಂದು ಮಾರಣಾಂತಿಕ ಹಲ್ಲೆ ಮಾಡಿ ಹೋಗಿದ್ದಾರೆ.

ಹಣ ಕೊಡಲಿಲ್ಲ ಎಂಬ ಕಾರಣಕ್ಕೆ ಸ್ವತಃ ಶಿವಕುಮಾರ್ ಅವರೇ ಬಂದು ಹಲ್ಲೆ ಮಾಡಿದರು. ಅವರ ಜೊತೆ ಬಂದಿದ್ದ ಇಬ್ಬರು ನನ್ನನ್ನು ಹಿಡಿದು ಕೊಂಡಿದ್ದರು ಎಂದು ಶಶಿ ಆರೋಪಿಸಿದ್ದಾರೆ. ನನ್ನ ಕುಟುಂಬಕ್ಕೆ ಜೀವ ಭಯ ಇದೆ, ಅವರು ತಾವು ಪೊಲೀಸ್ ಅಧಿಕಾರಿ ಎನ್ನೋ ದರ್ಪದಲ್ಲಿ ಹೀಗೆ ಮಾಡಿದ್ದಾರೆ ಎಂದು ಅಳಲು ತೋಡಿಕೊಂಡರು. ಈ ಸಂಬಂಧ ಗೊರೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೆಂಗಳೂರಿನ ವಿವೇಕನಗರ ಠಾಣೆಯಲ್ಲಿ ಇನ್ಸ್‌ಪೆಕ್ಟರ್ ಆಗಿದ್ದ ಶಿವಕುಮಾರ್ ಇತ್ತೀಚೆಗೆ ಲಾಕಪ್ ಡೆತ್ ಕೇಸ್ ಆರೋಪದಡಿ ಅಮಾನತು ಆಗಿದ್ದಾರೆ ಎನ್ನಲಾಗಿದೆ.

## ಕೋರೆಗಾಂವ್ ವಿಜಯೋತ್ಸವಕ್ಕೆ ಸಿದ್ಧತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ನಗರದಲ್ಲಿ ಮೊದಲ ಬಾರಿಗೆ ಆಚರಿಸಲಾಗುತ್ತಿರುವ 208ನೇ ವರ್ಷದ ಭೀಮಾ ಕೋರೆಂಗಾವ್ ವಿಜಯೋತ್ಸವಕ್ಕೆ ಅಂಬೇಡ್ಕರ್ ಮೊಮ್ಮಗ ಭಾರತೀಯ ಬೌದ್ಧ ಮಹಾಸಭಾದ ರಾಷ್ಟ್ರೀಯ ಕಾರ್ಯಾಧ್ಯಕ್ಷ ಭೀಮರಾವ್ ಅಂಬೇಡ್ಕರ್ ಆಗಮಿಸುತ್ತಿರುವುದರಿಂದ ಕಾರ್ಯಕ್ರಮ ಯಶಸ್ವಿಗೊಳಿಸಲು ಎಲ್ಲಾ ಸಿದ್ಧತೆ ನಡೆದಿದೆ ಎಂದು ಆಚರಣಾ ಸಮಿತಿ ಅಧ್ಯಕ್ಷ ಹೆಚ್.ಕೆ. ಸಂದೇಶ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸಮಿತಿ ರಚನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜ.20 ರಂದು ನಗರದ ಪ್ರಜಾಸೌಧದ ಪಕ್ಕದಲ್ಲಿರುವ ರಸ್ತೆಯಲ್ಲಿ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ. ಸಮುದಾಯದ, ಸಮಾಜದ ಮುಖಂಡರು ಸಹಕಾರ ನೀಡಬೇಕೆಂದು ಮನವಿ ಮಾಡಿದರು. ಭಾರತೀಯ ಬೌದ್ಧ ಮಹಾಸಭಾದ ಅಧ್ಯಕ್ಷ ನಿವೃತ್ತ ಡಿಸಿಪಿ ಎಸ್.ಸಿದ್ದರಾಜು ಹಾಗೂ ವಿವಿಧ ಮುಖಂಡರು ಆಗಮಿಸುತ್ತಿದ್ದು, ಈಗಾಗಲೇ ಹಲವು ಸಭೆ ಮಾಡಿ ಚರ್ಚೆ ಮಾಡಲಾಗಿದೆ ಎಂದರು.

ಕಾರ್ಯಕ್ರಮ ಅರ್ಥಪೂರ್ಣ ಹಾಗೂ ಅದ್ದೂರಿಯಾಗಿ ನಡೆಸಲು ಯಾವುದೇ ಗೊಂದಲಗಳಿಗೆ ಎಡೆಮಾಡಿ ಕೊಡದೆ ಆಚರಿಸಲು ಪ್ರಚಾರ ಸಮಿತಿ, ಮೆರವಣಿಗೆ ಸಮಿತಿ, ಆಹಾರ, ಬಂಟಿಗ್ಸ್, ಬೈಕ್ ರ್ಯಾಲಿ, ವಿಜಯಸ್ತಂಭ ಮೆರವಣಿಗೆ ಸಮಿತಿ, ಬೆಳ್ಳಿರಥ, ಆಟೋಗಳ ಸಮಿತಿ, ಸ್ವಾಗತ ಸಮಿತಿ ರಚನೆ ಮಾಡಿ ಆಯಾಯ ಸಮಿತಿ ಅಧ್ಯಕ್ಷರಿಗೆ ಜವಾಬ್ದಾರಿ ವಹಿಸಲಾಗಿದೆ.

ಎಲ್ಲರೂ ಸಹಕಾರ ನೀಡುವ ಮೂಲಕ ಕಾರ್ಯಕ್ರಮ ಅರ್ಥಪೂರ್ಣಗೊಳಿಸಿಕೊಡಬೇಕೆಂದರು.ಇದೊಂದು ಐತಿಹಾಸಿಕ ಕಾರ್ಯಕ್ರಮವಾಗಿದ್ದು ಡಿ.ಜೆ.ಸೌಂಡ್ಸ್, ಡೊಳ್ಳು ಕುಣಿತ ಹಾಗೂ ಇತರೆ ಕಲಾ ತಂಡಗಳು, ಭೀಮ ಗೀತೆಗಳು ಮೆರಗುನೀಡಲಿವೆ ಎಂದರು.

ಅಂದು ಬೌದ್ಧ ಧರ್ಮ ಸ್ವೀಕಾರ ಕಾರ್ಯಕ್ರಮ ಸಹ ನಡೆಯಲಿದೆ ಎಂದ ಅವರು, ಭೀಮ ಕೋರೆಂಗಾವ್ ಹೆಸರಿನಲ್ಲಿ ಕೆಲವರು ಕಚೇರಿಗಳಲ್ಲಿ ಹಣ ವಸೂಲಿ ಮಾಡುತ್ತಿದ್ದಾರೆ ಎಂಬ ಆರೋಪ ಸಣ್ಣದಾಗಿ ಕೇಳಿ ಬರುತ್ತಿದ್ದು, ಇದಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ ಸ್ವಾಭಿಮಾನಿ ಹೋರಾಟಕ್ಕೆ ಧಕ್ಕೆ ಆಗದಂತೆ ಸಮಿತಿ ಅಡಿಯಲ್ಲಿ ಅಧಿಕೃತ ಹಣಕಾಸು ಸಮಿತಿಗೆ ಸಮಾಜದ ನಾಯಕರು, ಮುಖಂಡರು, ದಾನಿಗಳು, ಅಂಬೇಡ್ಕರ್ ಅಭಿಮಾನಿಗಳು ನೆರವು ನೀಡಬೇಕೆಂದರು.

ಸಭೆಯಲ್ಲಿ ಸಮಿತಿ ಉಪಾಧ್ಯಕ್ಷ ಅಂಬುಗ ಮಲ್ಲೇಶ್, ಕಾರ್ಯದರ್ಶಿ ಮಂಜು, ಹಿರಿಯ ಮುಖಂಡರಾದ ರಾಜಶೇಖರ್, ರಾಜು ಗೊರೂರು, ಎ.ಟಿ. ಮಲ್ಲೇಶ್, ನಾಗರಾಜು ಹೆತ್ತೂರು, ವೆಂಕಟೇಶ್ ಬ್ಯಾಕರವಳ್ಳಿ, ಶಿವಮ್ಮ, ಭಾಗ್ಯ ಕಲಿವೀರ್, ರಾಜೇಶ್, ಉಮೇಶ್, ರಾಜು, ತೋಟೇಶ್, ಭಾನುಪ್ರಕಾಶ್, ದೇವರಾಜು, ಚೇತನ್, ನವೀನ್, ಪ್ರದೀಪ್, ಪ್ರಸನ್ನ, ಹರೀಶ್ ಉಳುವಾರೆ, ಗೋವಿಂದರಾಜು, ರಾಜೇಶ್, ವಿಠಲ್ ಹಾಜರಿದ್ದರು.

## ಜ.9 ರಂದು ರಾಜ್ಯಮಟ್ಟದ ವಿಚಾರ ಸಂಕಿರಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಡಾ.ಬಿ.ಆರ್. ಅಂಬೇಡ್ಕರ್ ಅವರ 69ನೇ ಪರಿನಿಬ್ಬಾಣ ದಿನಾಚರಣೆ ಹಾಗೂ ಭೀಮಾ ಕೋರೆಗಾಂವ್ ವಿಜಯೋತ್ಸವದ ಅಂಗವಾಗಿ ಮೀಸಲಾತಿಯಲ್ಲಿ ಕೆನೆ ಪದರ ಮತ್ತು ಖಾಸಗಿ ಕ್ಷೇತ್ರದಲ್ಲೂ ಮೀಸಲಾತಿ ಜಾರಿ ಕುರಿತು ಕರ್ನಾಟಕ ದಸಂಸ ಸ್ವಾಭಿಮಾನಿ ಪ್ರೊ.ಬಿ.ಕೃಷ್ಣಪ್ಪ ಬಣ, ರಾಜ್ಯ ಸಮಿತಿ ಜ.9 ರಂದು ರಾಜ್ಯಮಟ್ಟದ ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ಸಮಿತಿ ರಾಜ್ಯ ಸಂಚಾಲಕ ಎಂ.ಸೋಮಶೇಖರ್ ತಿಳಿಸಿದರು.



ಇಂದು ಸುದ್ದಿಗೋಷ್ಟಿಯಲ್ಲಿ ಈ ವಿಷಯ ತಿಳಿಸಿದ ಅವರು, ಅಂದು ಬೆಳಿಗ್ಗೆ 11.30ಕ್ಕೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಅರಸೀಕೆರೆ ಶಾಸಕ ಕೆ.ಎಂ. ಶಿವಲಿಂಗೇಗೌಡ ನೆರವೇರಿಸಲಿದ್ದಾರೆ. ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಜಸ್ಟೀಸ್ ನಾಗಮೋಹನ್ ದಾಸ್ ವಿಷಯ ಮಂಡಿಸಲಿದ್ದಾರೆ. ಅಂಬೇಡ್ಕರ್ ಭಾವಚಿತ್ರಕ್ಕೆ ಸಂಸದ ಶ್ರೇಯಸ್ ಎಂ.ಪಟೇಲ್ ಪುಷ್ಪಾರ್ಚನೆ ನಡೆಸಿಕೊಡುವರು ಎಂದರು.

ಶತಮಾನಗಳ ಕಾಲ ಶೋಷಣೆ, ದೌರ್ಜನ್ಯಕ್ಕೆ ಒಳಗಾಗಿದ್ದ ಅಸ್ಪೃಶ್ಯ ಸಮುದಾಯಗಳಿಗೆ ವಿದ್ಯೆ, ಸಂಪತ್ತು ಮತ್ತು ಅಧಿಕಾರವನ್ನು ಸಂವಿಧಾನದ ಮೂಲಕ ಒದಗಿಸಿದ ಮಹಾನ್ ಚಿಂತಕ ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ ಹೋರಾಟದ ಫಲವಾಗಿ ಎಸ್.ಸಿ, ಎಸ್.ಟಿ ಸಮುದಾಯಗಳಿಗೆ ಶಿಕ್ಷಣ, ಉದ್ಯೋಗ ಮತ್ತು ರಾಜಕೀಯ ಕ್ಷೇತ್ರದಲ್ಲಿ ಅವಕಾಶ ದೊರೆಯಿತು, ಸಮಾಜದ ಮುಖ್ಯ ವಾಹಿನಿಗೆ ಬರಲು ಸಾಧ್ಯವಾಯಿತು ಎಂದರು.

# ಜ.24ಕ್ಕೆ ಹಾಸನದಲ್ಲಿ ಜೆಡಿಎಸ್ ಬೃಹತ್ ಸಮಾವೇಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಜಿಲ್ಲಾ ಕೇಂದ್ರದಲ್ಲಿ ಜಾತ್ಯಾತೀತ ಜನತಾ ದಳದ ಬೃಹತ್ ಸಮಾವೇಶವನ್ನು ಜ. 24ರಂದು ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಸಚಿವ ಎಚ್.ಡಿ. ರೇವಣ್ಣ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಬೃಹತ್ ಕಾರ್ಯಕರ್ತರ ಸಮಾವೇಶ ಹಮ್ಮಿಕೊಳ್ಳಲಾಗುತ್ತಿದೆ. ಅದರ ಪ್ರಯುಕ್ತ ಜ. 11ರ ಭಾನುವಾರ ಬೆಳಿಗ್ಗೆ ಬೇಲೂರು ಹಾಗೂ ಮಧ್ಯಾಹ್ನ ದಂಡಿಗನಹಳ್ಳಿ ಹೋಬಳಿಯಲ್ಲಿ ಎರಡು ಕಡೆ ಪೂರ್ವಭಾವಿ ಕಾರ್ಯಕರ್ತರ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಅದೇ ರೀತಿ ಪಟ್ಟಣದ ಚನ್ನಾಂಬಿಕ ಕಲ್ಯಾಣ ಮಂಟಪದಲ್ಲಿ ಜ. 12ರ ಸೋಮವಾರ 10 ಗಂಟೆಗೆ ಹೊಳೆನರಸೀಪುರ ಹಾಗೂ ಹಳ್ಳಿಮೈಸೂರು ಹೋಬಳಿ



ಒಳಗೊಂಡಂತೆ ಶಾಸಕ ಎ.ಮಂಜು ಜೊತೆಗೂಡಿ ತಾಲೂಕು ಮಟ್ಟದ ಪೂರ್ವಭಾವಿ ಕಾರ್ಯಕರ್ತರ ಸಭೆ ಏರ್ಪಡಿಸಲಾಗಿದೆ. ಪಕ್ಷದ ಎಲ್ಲಾ ಮುಖಂಡರು, ಕಾರ್ಯಕರ್ತರು ಭಾಗವಹಿಸಬೇಕೆಂದು ತಿಳಿಸಿದ್ದಾರೆ. ಜಾತ್ಯತೀತ ಜನತಾ ದಳದ ಬೃಹತ್ ಸಮಾವೇಶಕ್ಕೆ 2 ಲಕ್ಷ ಕಾರ್ಯಕರ್ತರನ್ನು ಸೇರಿಸುವ ನಿಟ್ಟಿನಲ್ಲಿ ಪೂರ್ವಭಾವಿ ಸಭೆ ನಡೆಸಲಾಗುತ್ತಿದೆ. ಕಾರ್ಯಕ್ರಮಕ್ಕೆ ರಾಜ್ಯದ ನಮ್ಮ ಪಕ್ಷದ ನಾಯಕರು, ಸಂಸದರು ಶಾಸಕರು ಹಾಗೂ ಮಾಜಿ ಶಾಸಕರು ಭಾಗವಹಿಸಲಿದ್ದಾರೆ. ಸಮಾವೇಶದ ವೇದಿಕೆಯಲ್ಲಿ ಜಿಲ್ಲೆಗೆ ರಾಜ್ಯಕ್ಕೆ ನಮ್ಮ ಪಕ್ಷದ ಹಾಗೂ ದೇವೇಗೌಡ, ಕುಮಾರಸ್ವಾಮಿ ಅವರ ಕೊಡುಗೆ ಏನೆಂದುದರ ಬಗ್ಗೆ ಕಿರು ಹೊತ್ತಿಗೆ ಬಿಡುಗಡೆ ಮಾಡಲಾಗುತ್ತದೆ ಎಂದರು.

### ಕಾಂಗ್ರೆಸ್ ಸಮಾವೇಶಕ್ಕೆ ವ್ಯಂಗ್ಯ

ಕಾಂಗ್ರೆಸ್ ನಾಯಕರು ಎರಡು ಬಾರಿ ಜಿಲ್ಲೆಯಲ್ಲಿ ಸಮಾವೇಶ ನಡೆಸಿದ್ದಾರೆ. ಯಾವ ಪುರುಷಾರ್ಥಕ್ಕೆ ನಡೆಸಿದರು ಎಂಬುದು ಹಾಸ್ಯಾಸ್ಪದ ಎಂದು ಎಚ್.ಡಿ.ರೇವಣ್ಣ ವ್ಯಂಗ್ಯವಾಡಿದರು.

ಕಾಂಗ್ರೆಸ್ ಸರ್ಕಾರದಿಂದ ಜಿಲ್ಲೆಗೆ ದ್ರೋಹ ಹಾಗೂ ಕೆಲವು ಕಾಮಗಾರಿಗಳ ಅನುದಾನ ತಡೆ ಹಿಡಿಯಲಾಗಿರುವ ಬಗ್ಗೆ ಪ್ರಸ್ತಾಪಿಸಲಾಗುತ್ತದೆ. ಸಮಾವೇಶದ ಉದ್ದೇಶ ಪಕ್ಷದ ಸಂಘಟನೆ ಹಾಗೂ ವಿಧಾನಸಭೆ, ಲೋಕಸಭೆ ಚುನಾವಣಾ ನಡೆದ ನಂತರ ಸಮಾವೇಶ ಹಮ್ಮಿಕೊಂಡಿಲ್ಲ. ಹಾಗಾಗಿ ಪಕ್ಷ ಸಂಘಟನೆಯ ಉದ್ದೇಶದಿಂದ ಏರ್ಪಡಿಸಲಾಗುತ್ತದೆ ಎಂದು ಹೇಳಿದರು.

ತಾಲೂಕಿನಲ್ಲಿ ಕಾರ್ಮಿಕ ವರ್ಗದ ಜನರ ಮಕ್ಕಳ 1 ರಿಂದ ಪಿಯುಸಿ ವರೆಗಿನ ವಿದ್ಯಾಭ್ಯಾಸಕ್ಕಾಗಿ ಶ್ರಮಿಕ ಶಾಲೆ ತೆರೆಯಲು ಕ್ರಮ ಕೈಗೊಳ್ಳಲಾಗುತ್ತಿದೆ. ಅದಕ್ಕಾಗಿ 25 ಕೋಟಿ ರೂ. ವೆಚ್ಚವಾಗುತ್ತಿದೆ. ಹಾಗಾಗಿ ತಾಲೂಕಿನ ಭಾಗದಲ್ಲಿ 10 ಎಕರೆ ಭೂಮಿಯ ಅವಶ್ಯಕತೆ ಇದ್ದು ಗುರುತಿಸಿ ಕ್ರಮ ವಹಿಸಲು ಸೂಚಿಸಲಾಗಿದೆ ಎಂದರು.

ಪಟ್ಟಣದ ರೈಲ್ವೆ ನಿಲ್ದಾಣದ ಪೂರ್ವ ಭಾಗಕ್ಕೆ ಫ್ಲಾಟ್ ಫಾರಂ ನಿರ್ಮಿಸಲಾಗುತ್ತಿದ್ದು ಅದರ ಭೂ ವಾರಸುದಾರರಿಗೆ 6.5 ಕೋಟಿ ರೂ. ಬಾಕಿ ಹಣವನ್ನು ಕೊಡಿಸಲಾಗಿದೆ. ಇದರ ಪಕ್ಕದಲ್ಲಿ ಮಲ್ಲಪ್ಪನಹಳ್ಳಿ ರಸ್ತೆಗೆ ಸೇರ್ಪಡೆಗೊಳ್ಳುವಂತೆ ಸುಮಾರು 22 ಕೋಟಿ ರೂ. ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ. ಸೂರನಹಳ್ಳಿ ಮೇಲ್ಸೇತುವೆ ಮೂರು ತಿಂಗಳೊಳಗೆ ಪೂರ್ಣಗೊಂಡು ಸಂಚಾರಕ್ಕೆ ದೊರೆಯಲಿದೆ ಎಂದು ಹೇಳಿದರು.

## ಎಸ್.ಹೊಸಹಳ್ಳಿ ಡೇರಿಗೆ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ಎಸ್.ಹೊಸಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ಎಚ್.ಕೆ.ನವೀನ್ ಹಾಗೂ ಉಪಾಧ್ಯಕ್ಷರಾಗಿ ಎಚ್.ಕೆ. ಕಾಂತರಾಜ್ ಅವಿರೋಧ ಆಯ್ಕೆಯಾಗಿದ್ದಾರೆ.

ಇತ್ತೀಚೆಗೆ ಈ ಸಂಘಕ್ಕೆ ನಡೆದ ಚುನಾವಣೆಯಲ್ಲಿ 11 ನಿರ್ದೇಶಕರು ಆಯ್ಕೆಯಾಗಿದ್ದರು. ಬುಧವಾರ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆ ಪ್ರಕ್ರಿಯೆಯಲ್ಲಿ ಎಚ್.ಕೆ.ನವೀನ್ ಹಾಗೂ ಎಚ್.ಕೆ.ಕಾಂತರಾಜ್ ಹೊರತುಪಡಿಸಿ ಮತ್ಯಾರೂ ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಚುನಾವಣಾಧಿಕಾರಿ ಬಿ.ಕೆ.ವಿಜಯೇಂದ್ರ ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದರು.

ನಿರ್ದೇಶಕರಾದ ಗೌರಮ್ಮ ನಾಗೇಗೌಡ, ವಿನೋದ ಸುಕುಮಾರ್, ದ್ರಾಕ್ಷಾಯಿಣಿ ಅರುಣ್ ಕುಮಾರ್, ರಮೇಶ್, ಪಾರ್ವತಮ್ಮ, ಸುಮಾ ವಿಜಯಕುಮಾರ್, ಶೃತಿ ಮಂಜೇಗೌಡ, ಸುಜಾತ ನಾಗರಾಜ್, ಜಯಲಕ್ಷ್ಮಿ, ನಾಗರಾಜ್, ಸಂಘದ ಕಾರ್ಯದರ್ಶಿ ಮಂಜೇಗೌಡ, ಹಾಲು ಪರೀಕ್ಷಕ ಎಚ್.ಎಸ್.ನವೀನ್, ರೈತ ಸಂಘದ ಜಿಲ್ಲಾಧ್ಯಕ್ಷ ಮೀಸೆ ಮಂಜಣ್ಣ ಇತರರು ಇದ್ದರು.

ನೂತನ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರಿಗೆ ಹೊಸಹಳ್ಳಿ ಗ್ರಾಮದ ಮುಖಂಡರು ಮತ್ತು ಗ್ರಾಮಸ್ಥರು ಸಿಹಿ ವಿತರಿಸಿ ಅಭಿನಂದನೆ ಸಲ್ಲಿಸಿದರು.



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನದ ಎವಿಕೆ ಪಿಯು ಕಾಲೇಜಿನ ಪ್ರಾಂಶುಪಾಲರಾಗಿ ಕಾರ್ಮೆಲ್ ಶ್ರೀನಾ ಅವರು ಅಧಿಕಾರ ವಹಿಸಿಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಕಾಲೇಜಿನ ಉಪಾಧ್ಯಕ್ಷರಾದ ನಾಗರಾಜ್ ಜೈನ್ ಮತ್ತು ಆಡಳಿತ ಮಂಡಳಿ ನಿರ್ದೇಶಕರಾದ ರಾಜಶೇಖರ್ ಮತ್ತು ಶಂಕರ್ ಉಪಸ್ಥಿತರಿದ್ದರು. ಜೊತೆಗೆ ಕಾಲೇಜಿನ ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ನೂತನ ಪ್ರಾಂಶುಪಾಲರಿಗೆ ಅಭಿನಂದನೆ ಸಲ್ಲಿಸಿದರು. ನೂತನ ಪ್ರಾಂಶುಪಾಲರಿಗೆ ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಶುಭಾಶಯ ತಿಳಿಸಿದ್ದಾರೆ.

## ದೌರ್ಜನ್ಯ ನಿಯಂತ್ರಣಕ್ಕಾಗಿ ಬೀದಿ ನಾಟಕದಿಂದ ಅರಿವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಜಿಲ್ಲಾಧಿಕಾರಿ ನಿರ್ದೇಶನದಂತೆ ತಾಲೂಕಿನ ಹತ್ತು ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರ ಮೇಲೆ ನಡೆಯುವ ದೌರ್ಜನ್ಯ ತಡೆ ಕುರಿತಂತೆ ಬೀದಿ ನಾಟಕದ ಮೂಲಕ ಅರಿವು ಮೂಡಿಸಲು ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಜಿ.ಮುನಿರಾಜ್ ಹೇಳಿದರು.

ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ತಾಲೂಕು ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಅಸ್ಪೃಶ್ಯತಾ ನಿವಾರಣೆ, ವಿಚಾರಗೋಷ್ಠಿ, ಬೀದಿ ನಾಟಕದ ಮೂಲಕ ಅರಿವು ಮೂಡಿಸುವ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು.

ಗ್ರಾಮಗಳಲ್ಲಿ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಎಲ್ಲರೂ ಮಾನವೀಯ



ನೆಲಗಟ್ಟಿನ ಹಿನ್ನೆಲೆಯಲ್ಲಿ ಪರಸ್ಪರ ಸಾಮರಸ್ಯದಿಂದ ಬದುಕುವಂತೆ ನಾಡಿನ ಹಿರಿಯ ವ್ಯಕ್ತಿಗಳು, ಬದುಕಿ ಆದರ್ಶ ಪ್ರಾಯರಾಗಿದ್ದಾರೆ. ಅದರಂತೆ ಎಲ್ಲಾ ಸಾರ್ವಜನಿಕರು ಮೇಲು ಕೀಳೆಂಬ ಭಾವನೆಗಳನ್ನು ತೊರೆದು ಸಹೋದರತ್ವದಂತೆ ಬದುಕಿ ಯುವ ಪೀಳಿಗೆಗೆ ಉತ್ತಮ ಸಂದೇಶ ರವಾನಿಸಬೇಕೆಂದು ಕರೆ ನೀಡಿದರು.

ತಾಲೂಕು ಸಮಾಜ ಕಲ್ಯಾಣಾಧಿಕಾರಿ ಕೃಷ್ಣಮೂರ್ತಿ ಮಾತನಾಡಿ, ಕರ್ನಾಟಕ ಸರ್ಕಾರ ಗ್ರಾಮೀಣ ಪ್ರದೇಶ ಹಾಗೂ ನಗರ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟವರ್ಗಗಳ ಮೇಲೆ ನಡೆಯುವ ದೌರ್ಜನಗಳನ್ನು ತಡೆಗಟ್ಟಲು ನೂರಾರು ಕಾನೂನುಗಳನ್ನು ಜಾರಿಗೆ ತಂದಿದೆ.

ಪ್ರತಿವರ್ಷ ಸರ್ಕಾರ ಅಸ್ಪೃಶ್ಯತಾ ನಿವಾರಣ ಕಾರ್ಯಕ್ರಮವನ್ನು ಹಮ್ಮಿಕೊಂಡು ಅನೇಕ ರೀತಿಯಲ್ಲಿ ಜಾಗೃತಿ ಮೂಡಿಸುತ್ತಾ ಬರುತ್ತಿದೆ. ಆದರೂ ಸಮಾಜದಲ್ಲಿ ಜಾತಿ ಪದ್ಧತಿ ಅಸ್ಪೃಶ್ಯತೆ ಹೆಚ್ಚು ಕಂಡು ಬರುತ್ತಿದ್ದು ಇಂತಹ ಕೆಟ್ಟ ಪದ್ಧತಿಗಳನ್ನು ನಿವಾರಿಸುವ ನೆಟ್ಟಿನಲ್ಲಿ ಹತ್ತು ಹಲವಾರು ಕಾರ್ಯಕ್ರಮಗಳನ್ನು ಹಾಕಿಕೊಂಡು ಬರುತ್ತಿದೆ. ತಾಲೂಕು ವ್ಯಾಪ್ತಿಯಲ್ಲಿ ದೌರ್ಜನ್ಯ ಪ್ರಕರಣಗಳು ದಿನೇ ದಿನೇ ವರದಿಯಾಗುತ್ತಿವೆ ಆದ್ದರಿಂದ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಗ್ರಾಮಗಳಿಗೆ ಕಲ್ಪಿತ ಜನ ಜಾಗೃತಿ ಮತ್ತು ಸಾಂಸ್ಕೃತಿಕ ಅಭಿವೃದ್ಧಿ ಸಂಸ್ಥೆ ಕಟ್ಟೆ ಬೆಳಗುಳಿಯ ಶ್ರೀರಾಮ ನಗರ ಬಾಗಿವಾಳು ಅವರಿಂದ ವಿಚಾರ ಸಂಕಿರಣ ಕಾರ್ಯಗಾರ ಮತ್ತು ಬೀದಿ ನಾಟಕಗಳ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ತಾಲೂಕಿನ ಉದ್ದೂರು, ಬಂಡಿ ಶೆಟ್ಟಿಹಳ್ಳಿ, ಕೆರಗೋಡು, ಎಲೆ ಜಾಗ ಹಳ್ಳಿ, ಹಳ್ಳಿ ಮೈಸೂರು, ದೊಡ್ಡ ಹಳ್ಳಿ, ಬೆಟ್ಟದ ಸಾತೇನಹಳ್ಳಿ, ಹರಿಹರಪುರ, ಹಳೆಕೋಟೆ ಮತ್ತು ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಮಹಾತ್ಮವಾದ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ನಗರ ಪೊಲೀಸ್ ಉಪ ನಿರೀಕ್ಷಕ ಅಭಿಜಿತ್, ಶಿರಸ್ತೆದಾರ್ ವೆಂಕಟೇಶ್, ಸಿಬ್ಬಂದಿ ಹಾಜರಿದ್ದರು.

## ಬೇಲೂರಿನ ಚನ್ನಕೇಶವ ಬಡಾವಣೆ ಜನರಿಗೆ ಶೀಘ್ರ ಹಕ್ಕು ಪತ್ರ

### ಶಾಸಕ ಹೆಚ್.ಕೆ.ಸುರೇಶ್ ಭರವಸೆ ಅಧಿಕಾರಿಗಳು, ಸ್ಥಳೀಯರ ಸಭೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪಟ್ಟಣದ ಚನ್ನಕೇಶವ ನಗರ ಬಡಾವಣೆ ನಿವಾಸಿಗಳಿಗೆ ಎರಡು ದಶಕ ಕಳೆದರೂ ಹಕ್ಕುಪತ್ರ ನೀಡದಿರುವುದು ವಿಪರ್ಯಾಸ. ಅಧಿಕಾರಿಗಳು ಇನ್ನಾದರೂ ಎಚ್ಚೆತ್ತು ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಎಚ್.ಕೆ.ಸುರೇಶ್ ಸೂಚಿಸಿದರು. ಪಟ್ಟಣದ ಚನ್ನಕೇಶವ ನಗರದ ನಿವಾಸಿಗರ ಮನವಿ ಮೇರೆಗೆ ಸಂಬಂಧಿಸಿದ ಅಧಿಕಾರಿಗಳನ್ನು ಸ್ಥಳಕ್ಕೆ ಕರೆಸಿ ನಗರದ ಜನರೊಂದಿಗೆ ಸಭೆಯಲ್ಲಿ ಮಾತನಾಡಿ, ಸಮಸ್ಯೆಗಳಿಗೆ ಉತ್ತರ ಮತ್ತು ಪರಿಹಾರ ನೀಡುವ ಕೆಲಸ ಮಾಡಿದಲ್ಲದೆ, ಇನ್ನೊಂದು ತಿಂಗಳೊಳಗೆ ನಿವಾಸಿಗಳಿಗೆ ಸೂಕ್ತ ಹಕ್ಕುಪತ್ರ ಹಾಗೂ ಪುರಸಭೆಯಿಂದ ಇ-ಸ್ವತ್ತು ನೀಡಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಚನ್ನಕೇಶವ ನಗರದ ಜನರಿಗೆ ಎರಡು ದಶಕಗಳಿಂದ ಸುಗಮವಾಗಿ ಓಡಾಡಲು ಸರಿಯಾದ ರಸ್ತೆ ಇಲ್ಲ. ಮನೆಗಳಲ್ಲಿ ವಾಸವಿರುವವರಿಗೆ ಹಕ್ಕುಪತ್ರ ನೀಡಿಲ್ಲ. ಹೀಗಾದರೆ ನಾಗರೀಕರು ಹೇಗೆ ನೆಮ್ಮದಿ ಜೀವನ ನಡೆಸಲು ಸಾಧ್ಯ. ನಾನು ಚುನಾವಣೆ ಪೂರ್ವದಲ್ಲಿ ಬಂದ ಸಂದರ್ಭ ಚನ್ನಕೇಶವ ನಗರದ ನಿವಾಸಿಗಳ ಬವಣೆ ಅರಿತು ಶೀಘ್ರವೇ ಹಕ್ಕುಪತ್ರ ಕೊಡಿಸುತ್ತೇನೆಂದು ಮಾತು ಕೊಟ್ಟಿದ್ದೆ. ಇಲ್ಲಿ ಅಂಬೇಡ್ಕರ್ ವಿಶೇಷ ಯೋಜನೆಯಡಿ 37 ಜನರಿಗೆ ಹಕ್ಕುಪತ್ರ ಸಿಕ್ಕಿರುವುದು ಬಿಟ್ಟರೆ 172 ಮನೆಗಳಿಗೆ ಹಕ್ಕುಪತ್ರ ಇನ್ನೂ ಸಿಕ್ಕಿಲ್ಲ. ಉಳಿದವರಿಗೆ ಒಂದು ತಿಂಗಳಲ್ಲಿ ಹಕ್ಕುಪತ್ರ ನೀಡಲು ಕೊಳಚೆ ನಿರ್ಮೂಲನ ಮಂಡಳಿ ಅಭಿವೃದ್ಧಿ ನಿಗಮದ ಅಧಿಕಾರಿಗೆ ತಿಳಿಸಿದ್ದೇನೆ. ಪುರಸಭೆ ಮುಖ್ಯಾಧಿಕಾರಿ, ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ಸರಿಯಾದ ಮಾಹಿತಿ ಪಡೆದು ಒಂದು ತಿಂಗಳಲ್ಲಿ ಹಕ್ಕು ಪತ್ರ ಕೊಡಿಸಬೇಕು. ನಂತರ ಪುರಸಭೆಯಿಂದ ಈ ಸ್ವತ್ತು ಮಾಡಿಕೊಡಬೇಕು. ಅದಕ್ಕೆ ಖರ್ಚಾಗುವ ವೆಚ್ಚವನ್ನು ನಾನೇ ಭರಿಸುತ್ತೇನೆ. ಇಲ್ಲಿಗೆ ಬೇಕಾದ ಎಲ್ಲ ಮೂಲ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಶೀಘ್ರವೇ ಕ್ರಮ ಕೈಗೊಳ್ಳಲಾಗುವುದು ಎಂದರು.

ಪುರಸಭೆ ಸದಸ್ಯ ಬಿ.ಸಿ.ಜಗದೀಶ್ ಮಾತನಾಡಿ, ಶಾಸಕ ಹೆಚ್.ಕೆ.ಸುರೇಶ್ ಮಾತನಾಡಿ, ಜನರ ಶ್ರೇಯೋಭಿವೃದ್ಧಿಗಾಗಿ ಶಾಸಕ ಸುರೇಶ್ ಹಗಲಿರುಳು ಶ್ರಮಿಸುತ್ತಿದ್ದಾರೆ. ಇಲ್ಲಿನ ಪುರಸಭೆಯ ಸಮಸ್ಯೆಗಳನ್ನು ಬೆಳಗಾವಿ ಅಧಿವೇಶನದಲ್ಲಿ ಚರ್ಚಿಸಿ, ಅಲ್ಲಿಯೇ ಅಧಿಕಾರಿಗಳ ಸಭೆ ಕರೆದು ಅಭಿವೃದ್ಧಿಗೆ ಒತ್ತು ನೀಡಿದ್ದು ಕಾಣುತ್ತದೆ. ಜತೆಗೆ ಶಾಸಕರು ಬಡವರಿಗೆ ಆಶ್ರಯ ನಿವೇಶನ ನೀಡಲು, ಚನ್ನಕೇಶವ ನಗರ ನಿವಾಸಿಗಳಿಗೆ ಹಕ್ಕುಪತ್ರ ಕೊಡಿಸಲು ಮುಂದಾಗಿರುವುದು ಉತ್ತಮ ಬೆಳವಣಿಗೆಯಾಗಿದೆ. ಪುರಸಭೆಯಿಂದ ನಿವಾಸಿಗಳಿಗೆ ಇ-ಸ್ವತ್ತು ಮಾಡಿಸಲು ತಾವೇ ಸರ್ಕಾರದ ಶುಲ್ಕ ಭರಿಸಲು ಮುಂದಾಗಿರುವುದು ಸಂತೋಷ ತಂದಿದೆ ಎಂದರು. ಪುರಸಭಾ ಸದಸ್ಯರಾದ ಶ್ರೀನಿವಾಸ್, ಮುಖ್ಯಾಧಿಕಾರಿ ಬಸವರಾಜ್ ಶಿಗ್ಗಾವಿ, ಕಸಾಪ ಗೌರವ ಕಾರ್ಯದರ್ಶಿ ಬಿ.ಬಿ.ಶಿವರಾಜ್, ಮುಖಂಡ ನಿಂಗರಾಜ್, ರಮೇಶ್ ಇತರರಿದ್ದರು.

## ಅಜ್ಜೇನಹಳ್ಳಿ ರಸ್ತೆ ಕಾಮಗಾರಿಗೆ ಭೂಮಿಪೂಜೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲೂಕಿನ ಇಬ್ಬೀಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಜ್ಜೇನಹಳ್ಳಿ ಗ್ರಾಮದಿಂದ ಮುಖ್ಯ ರಸ್ತೆವರೆಗಿನ 30 ಲಕ್ಷ ರೂ. ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಶಾಸಕ ಎಚ್.ಕೆ.ಸುರೇಶ್ ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿ, ಗ್ರಾಮೀಣ ಪ್ರದೇಶಗಳ ಮೂಲಸೌಕರ್ಯಗಳ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡಿದ್ದು, ಉತ್ತಮ ರಸ್ತೆ ಸಂಪರ್ಕದಿಂದ ಗ್ರಾಮಗಳ ಆರ್ಥಿಕ, ಸಾಮಾಜಿಕ ಅಭಿವೃದ್ಧಿ ಸಾಧ್ಯವಾಗಲಿದೆ. ಅಲ್ಲದೆ ಈ ರಸ್ತೆ ಅಭಿವೃದ್ಧಿಪಡಿಸುವವಂತೆ ಅಜ್ಜೇನಹಳ್ಳಿ ಗ್ರಾಮಸ್ಥರ ಬಹುಕಾಲದ ಬೇಡಿಕೆಯೂ ಸಹ ಆಗಿತ್ತು. ಈ ನಿಟ್ಟಿನಲ್ಲಿ ಅಜ್ಜೇನಹಳ್ಳಿ ಗ್ರಾಮದ ಜನರಿಗೆ ಸುಗಮ ಸಂಚಾರ ಕಲ್ಪಿಸುವ ಉದ್ದೇಶದಿಂದ ಈ ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಚಾಲನೆ ನೀಡಿದ್ದೇವೆ. ಮುಂದಿನ ದಿನಗಳಲ್ಲಿ ಇಬ್ಬೀಡು ಗ್ರಾಪಂ ವ್ಯಾಪ್ತಿಯ ಇತರೆ ಗ್ರಾಮಗಳಲ್ಲಿಯೂ ರಸ್ತೆ, ಕುಡಿಯುವ ನೀರು, ಚರಂಡಿ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಹಂತ ಹಂತವಾಗಿ ಅಭಿವೃದ್ಧಿ ಪಡಿಸಲಾಗುವುದು. ಗುತ್ತಿಗೆದಾರರು ಕಾಮಗಾರಿಯನ್ನು ಗುಣಮಟ್ಟದಲ್ಲಿ ರಾಜಿ ಇಲ್ಲದೆ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕು. ಹೆಚ್ಚುವರಿ ಹಣ ಬೇಕಿದ್ದರೆ ಕೊಡಲಾಗುವುದು ಎಂದರು.

ಗ್ರಾಮದ ಕಿರಣ್ ಸೋಮಶೇಖರ್ ಮಾತನಾಡಿ, ಮಳೆಗಾಲದಲ್ಲಿ ನಾವುಗಳು ರಸ್ತೆಯ ಅವ್ಯವಸ್ಥೆಯಿಂದ ಬಹಳ ತೊಂದರೆ ಅನುಭವಿಸುತ್ತಿದ್ದೆವು. ಆದರೆ ಈಗ ಕಾಂಕ್ರೀಟ್ ರಸ್ತೆ ನಿರ್ಮಾಣವಾಗುತ್ತಿರುವುದರಿಂದ ಸಂತೋಷವಾಗಿದೆ. ಜತೆಗೆ ಸಂಚಾರ ಸುಲಭವಾಗಲಿದೆ. ಕೊಟ್ಟ ಮಾತಿನಂತೆ ನಡೆದುಕೊಂಡ ಶಾಸಕರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ಗ್ರಾಪಂ ಅಧ್ಯಕ್ಷೆ ನವಿನಾ ಅಣ್ಣಪ್ಪ, ಗ್ರಾಮಸ್ಥರಾದ ನಾಗರಾಜ್ ಪರಮೇಶ್, ದೇವರಾಜ್, ಜಯಪ್ಪ, ಮಂಜುನಾಥ್, ನಾಗಮ್ಮ ಇತರರಿದ್ದರು.

## ಸ್ವಚ್ಛ ಪರಿಸರವಿದ್ದರಷ್ಟೇ ಆರೋಗ್ಯ: ಬಾಲಕೃಷ್ಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಆರೋಗ್ಯವಾಗಿರಬೇಕಾದರೆ ಮೊದಲು ಸ್ವಚ್ಛತೆಗೆ ಆದ್ಯತೆ ನೀಡಬೇಕೆಂದು ಶಾಸಕ ಸಿ.ಎನ್. ಬಾಲಕೃಷ್ಣ ತಿಳಿಸಿದರು.

ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಹಿಂಭಾಗದಲ್ಲಿರುವ ಪಿಎಂಶ್ರೀ ಶಾಲೆಯಲ್ಲಿ ನಗರೋತ್ಥಾನ ಯೋಜನೆಯ 14 ಲಕ್ಷ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಪ್ರತ್ಯೇಕ ಶೌಚಾಲಯ ಉದ್ಘಾಟಿಸಿ ಮಾತನಾಡಿ, ಮನುಷ್ಯನಿಗೆ ಆರೋಗ್ಯವೇ ಭಾಗ್ಯ. ಆರೋಗ್ಯ ಉತ್ತಮವಾಗಿರಲು ನೈರ್ಮಲ್ಯಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ಶೌಚಾಲಯವನ್ನು




ಬಳಸಿದ ಬಳಿಕ ಕೈಗಳನ್ನು ನೀರು ಹಾಗೂ ಸಾಬೂನು ಬಳಸಿ ಚೆನ್ನಾಗಿ ತೊಳೆದುಕೊಳ್ಳಬೇಕು. ಶೌಚಾಲಯ, ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛವಾಗಿರಿಸಿಕೊಳ್ಳಿ. ನಮ್ಮ ಉತ್ತಮ ಆರೋಗ್ಯಕ್ಕಾಗಿ ವೈಯಕ್ತಿಕ ಸ್ವಚ್ಛತೆ ಎಂಬುದು ನಮ್ಮೆಲ್ಲರ ಜವಾಬ್ದಾರಿ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ವೈಯಕ್ತಿಕ ಸ್ವಚ್ಛತೆಯ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು. ಶೌಚಾಲಯಗಳ ಸ್ವಚ್ಛತೆಯ ಬಗ್ಗೆ ಹೆಚ್ಚಿನ ಜವಾಬ್ದಾರಿ ವಹಿಸಬೇಕೆಂದರು. ಖಾಸಗಿ ಶಾಲೆಗಳಿಗೆ ಕಡಿಮೆ ಇಲ್ಲದಂತೆ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ವಿದ್ಯಾರ್ಥಿಗಳಿಗೆ ಶಾಲೆಯಲ್ಲಿ ಮೂಲಸೌಕರ್ಯ ಅತಿ ಮುಖ್ಯ. ಈ ನಿಟ್ಟಿನಲ್ಲಿ ಗಂಡು ಮಕ್ಕಳು ಹಾಗೂ ಹೆಣ್ಣು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯ ನಿರ್ಮಾಣ ಮಾಡಲಾಗಿದೆ ಎಂದು ತಿಳಿಸಿದರು

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್.ದೀಪ, ಕ್ಷೇತ್ರ ಸಂಪನ್ಮೂಲ ಸಮನ್ವಯಧಿಕಾರಿ ಕೆ.ಎನ್.ಅನಿಲ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಉಮಾಶಂಕರ್, ಪುರಸಭಾ ಮುಖ್ಯಾಧಿಕಾರಿ ಆರ್.ಯತೀಶ್ ಕುಮಾರ್, ಎಸ್‌ಡಿಎಂಸಿ ಅಧ್ಯಕ್ಷ ರಮೇಶ್, ಉಪಾಧ್ಯಕ್ಷೆ ವಿದ್ಯಾ ರಾಣಿ, ಮುಖ್ಯ ಶಿಕ್ಷಕ ಬಿ.ಆರ್.ರಮೇಶ್, ಲಿಂಗರಾಜು ಶಿಕ್ಷಕರ ಸಂಘದ ಅಧ್ಯಕ್ಷ ರಮೇಶ್ ಇತರರಿದ್ದರು.

## ತರಾತುರಿಯಲ್ಲಿ ಅಂಬೇಡ್ಕರ್ ಪ್ರತಿಮೆ ಅನಾವರಣ ಬೇಡ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಚನ್ನರಾಯಪಟ್ಟಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಕಂಚಿನ ಪ್ರತಿಮೆ ಅನಾವರಣ ಕಾರ್ಯಕ್ರಮ ತರಾತುರಿಯಲ್ಲಿ ಜ.26 ರಂದು ನಡೆಯುವುದು ಬೇಡ ಎಂದು ವಿವಿಧ ದಲಿತ ಸಂಘಟನೆ ಮುಖಂಡ ಶ್ರೀನಿವಾಸ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರತಿಮೆ ನಿರ್ಮಾಣ ಕಾಮಗಾರಿ ಇನ್ನೂ ಪೂರ್ಣಗೊಂಡಿಲ್ಲ, ಹಾಗಾಗಿ ಅಂದು ಪ್ರತಿಮೆ ಅನಾವರಣ ಬೇಡ. ಬಲವಂತವಾಗಿ ಲೋಕಾರ್ಪಣೆ ಮಾಡಿದರೆ ಪ್ರತಿಭಟನೆ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪುರಸಭೆಯ 15ನೇ ಹಣಕಾಸು ಯೋಜನೆಯ 30 ಲಕ್ಷ ರೂ. ವೆಚ್ಚದಲ್ಲಿ ಪ್ರತಿಮೆ ನಿರ್ಮಾಣ ಮಾಡಲಾಗುತ್ತಿದೆ. ಈ ಹಿಂದೆ ಕರೆದಿದ್ದ ಪೂರ್ವಭಾವಿ ಸಭೆಯಲ್ಲಿ ಎಲ್ಲ ದಲಿತ ಮುಖಂಡರು, ಸಾರ್ವಜನಿಕರು, ಕಾಮಗಾರಿ ಸಂಪೂರ್ಣವಾಗಿ ಮುಗಿಯುವವರೆಗೂ, ರಾಜ್ಯ ಸರ್ಕಾರದ ನಮ್ಮ ಸಮುದಾಯದ ಎಲ್ಲ ಸಚಿವರು ಭಾಗಿಯಾಗುವುದು ಖಾತ್ರಿಯಾಗುವವರೆಗೂ ಕಾರ್ಯಕ್ರಮ ಮುಂದೂಡಬೇಕು ಎಂದು ಸ್ಥಳೀಯ ಶಾಸಕರಿಗೆ ತಿಳಿಸಿದ್ದೆವು.

ಆದರೆ ನಮ್ಮ ಮಾತಿಗೆ ಬೆಲೆಕೊಡದೆ ತಾಲುಕು ಆಡಳಿತ ಮತ್ತು ಶಾಸಕರು ಎಲ್ಲರ ಅಭಿಪ್ರಾಯಕ್ಕೆ ವಿರುದ್ಧವಾಗಿ ಆತುರದಲ್ಲಿ ಕಾರ್ಯಕ್ರಮ ಮಾಡಲು ಹೊರಟಿದ್ದಾರೆ. ಹಠಕ್ಕೆ ಬಿದ್ದು ಜ.26 ರಂದೇ ಕಾರ್ಯಕ್ರಮ ಮಾಡಿದರೆ ಪ್ರತಿಭಟನೆ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಪ್ರತಿಮೆ ಸುತ್ತಮುತ್ತ ಇಂಟರ್‌ಲಾಕ್ ಕಾಮಗಾರಿ ಆಗಿಲ್ಲ. ಹಿಂದೆ ಪುರಸಭೆ ಪ್ಲಾನ್ ಮಾಡಿದಂತೆ ಕಾಮಗಾರಿ ನಡೆದಿಲ್ಲ. ಅದು ಆಗುವವರೆಗೂ ಉದ್ಘಾಟನೆ ಆಗುವುದು ಬೇಡ ಎಂದರು.

ಕಾಂಗ್ರೆಸ್ ಜಿಲ್ಲಾ ಎಸ್‌ಸಿ/ಎಸ್‌ಟಿ ಘಟಕದ ಅಧ್ಯಕ್ಷ ಬಾಲು ಅವರು ಮಾತನಾಡಿ, ಶಾಸಕರು 33 ಲಕ್ಷ ಸ್ವಂತ ಹಣ ಹಾಕಿ ಕಂಚಿನ ಪ್ರತಿಮೆ ನಿರ್ಮಾಣ ಮಾಡಲಾಗುತ್ತಿದೆ ಎಂದು ಶಾಸಕರು ಹೇಳುತ್ತಿದ್ದಾರೆ. ಆದರೆ 30 ಲಕ್ಷ ರೂ. ಸರ್ಕಾರದ ಹಣ, ಪುರಸಭೆಯ ಹಣ. ಶಾಸಕರು ಹಣ ನೀಡಿದ್ದರೆ ಸಂತೋಷ, ಇಲ್ಲದೇ ಇದ್ದರೆ ಸುಳ್ಳು ಹೇಳುವುದು ಏಕೆ ಎಂದು ಪ್ರಶ್ನಿಸಿದರು.

ಕೆಡಿಪಿ ಸದಸ್ಯ ಮಧುಸೂದನ್ ಮಾತನಾಡಿ, ಸಚಿವರ ದಿನಾಂಕ ಸಿಗುವವರೆಗೂ, ಕಾಮಗಾರಿ ಸಂಪೂರ್ಣ ಮುಗಿಯುವವರೆಗೂ ಪ್ರತಿಮೆ ಲೋಕಾರ್ಪಣೆ ಮಾಡುವುದು ಬೇಡ, ಮಾಡಿದರೆ ನಮ್ಮ ವಿರೋಧ ಖಂಡಿತಾ ಇದೆ.

ಹಾಗಾಗಿ ಎಲ್ಲರ ಅಭಿಪ್ರಾಯಕ್ಕೆ ಗೌರವ ಕೊಟ್ಟು ಕಾರ್ಯಕ್ರಮ ಮಾಡಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಚಂದ್ರು, ತಗಡೂರು, ವಾಸು, ಬಾಲಾಜಿ ಮೊದಲಾದವರಿದ್ದರು.

## ಜೆಎಸ್‌ಎಸ್ ಸಂಸ್ಥೆಯಲ್ಲಿ ಗುಣಮಟ್ಟದ ಶಿಕ್ಷಣ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯಲ್ಲಿ ಉತ್ತಮ ಶೈಕ್ಷಣಿಕ ವಾತಾವರಣವಿದ್ದು ಗ್ರಾಮೀಣ ಮಕ್ಕಳಿಗೆ ಮೌಲ್ಯಯುತ ಗುಣಮಟ್ಟದ ಶಿಕ್ಷಣ ದೊರೆಯುತ್ತಿದೆ. ಅದರ ಉಪಯೋಗವನ್ನು ವಿದ್ಯಾರ್ಥಿಗಳು ಸದ್ಬಳಕೆ ಮಾಡಿಕೊಳ್ಳಬೇಕೆಂದು ಶಿಕ್ಷಕಿ ಕಾವ್ಯಶ್ರೀ ಕೃಷ್ಣ ಅಭಿಪ್ರಾಯಪಟ್ಟರು.

ತಾಲ್ಲೂಕಿನ ದೊಡ್ಡಕಾಡನೂರು ಜೆಎಸ್‌ಎಸ್ ಪದವಿ ಪೂರ್ವ ಕಾಲೇಜಿನಲ್ಲಿ ಇತ್ತೀಚೆಗೆ ನಡೆದ 2025-26ನೇ ಸಾಲಿನ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳ ಸಮಾರೋಪ ಸಮಾರಂಭದಲ್ಲಿ ಸಮಾರೋಪ ಭಾಷಣ ಮಾಡಿದರು.

ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯಲ್ಲಿ ಉತ್ತಮ ಶೈಕ್ಷಣಿಕ ವಾತಾವರಣವಿದೆ. ಇಲ್ಲಿ ಶಿಕ್ಷಣ ಕಲಿಯುವುದೇ ಪುಣ್ಯ. ಇಲ್ಲಿ ನುರಿತ ಪ್ರಾಂಶುಪಾಲರು ಮತ್ತು ಉಪನ್ಯಾಸಕ ವರ್ಗವಿದೆ. ಇವರ ಅನುಭವದ ಮೂಲಕ ಇಲ್ಲಿನ ವಿದ್ಯಾರ್ಥಿಗಳಲ್ಲಿ ಆತ್ಮಾಭಿಮಾನ ಮತ್ತು ದೇಶಾಭಿಮಾನ ಬೆಳೆಸುತ್ತಿದ್ದಾರೆ. ಆದ್ದರಿಂದ ಇಲ್ಲಿ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳು ಭಾರತದ ಭಾವಿ ಪ್ರಜೆಗಳಾಗಿ ರೂಪುಗೊಳ್ಳುತ್ತಾರೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಯಾರೋ ಹೇಳಿದುದನ್ನು ಬಾಯಿಪಾಠ ಮಾಡಬಾರದು, ಸಾಮಾನ್ಯ ಜ್ಞಾನ ಬೆಳೆಸಿಕೊಳ್ಳಬೇಕು. ಭಾರತದ ಮಹಾ ಕಾವ್ಯಗಳು, ಇತಿಹಾಸ ಮತ್ತು ಸಂಸ್ಕೃತಿಯ ಬಗ್ಗೆ ಅರಿವಿರಬೇಕು. ನಮ್ಮ ಪ್ರಸ್ತುತ ಪರಿಸ್ಥಿತಿಗೆ ಅನುಗುಣವಾಗಿ ನಮ್ಮ ಜ್ಞಾನವನ್ನು ಬಳಕೆ ಮಾಡುವ ಜ್ಞಾನ ಹೊಂದಿರಬೇಕು. ವಿದ್ಯಾರ್ಥಿಗಳು ಶಿಕ್ಷಕರು ಹೇಳಿಕೊಡುವ ವಿಷಯಗಳನ್ನು ಒಂದು ಕಿವಿಯಲ್ಲಿ ಕೇಳಿ ಮತ್ತೊಂದು ಕಿವಿಯಲ್ಲಿ ಬಿಡಬಾರದು. ಕೇಳಿಸಿಕೊಂಡ ಜ್ಞಾನವನ್ನು ಮನನ ಮಾಡಿಕೊಂಡು ಸಮಯ ಸಂದರ್ಭ ಬಂದಾಗ ಉಪಯೋಗಿಸಿಕೊಳ್ಳಬೇಕು. ಯಾವುದೇ ಆಕರ್ಷಣೆಗಳಿಗೆ ಬಲಿಯಾಗದೇ ತಮ್ಮ ಗುರಿಯನ್ನು ಮುಟ್ಟಲು ಪ್ರಯತ್ನಿಸಬೇಕು ಎಂದು ಕಿವಿಮಾತು ಹೇಳಿದರು.

ಜೆಎಸ್‌ಎಸ್ ಪ್ರೌಢ ಶಾಲೆಯ ಮುಖ್ಯಶಿಕ್ಷಕ ಪಿ.ಸುರೇಶ್ ಮಾತನಾಡಿ, ನಮ್ಮ ಜೆಎಸ್‌ಎಸ್ ಪದವಿ ಪೂರ್ವ ಕಾಲೇಜಿನಲ್ಲಿ ಪಾಠ ಪ್ರವಚನಗಳು ಉತ್ತಮವಾಗಿ ನಡೆಯುತ್ತಿವೆ. ಬೆಳಿಗ್ಗೆಯಿಂದ ಸಂಜೆಯ ವರೆಗೂ ನಿರಂತರವಾಗಿ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುವ ಕೆಲಸವನ್ನು ಇಲ್ಲಿನ ಪ್ರಾಂಶುಪಾಲರು ಮತ್ತು ಉಪನ್ಯಾಸಕರು ಮಾಡುತ್ತಿದ್ದಾರೆ. ಸಾಮಾನ್ಯ ವಿದ್ಯಾರ್ಥಿಯು ಕೂಡ ಇಲ್ಲಿ ಉತ್ತಮ ಜ್ಞಾನ ಪಡೆದುಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಈ ಕಾಲೇಜಿಗೆ ಪ್ರವೇಶ ಪಡೆಯಬೇಕು ಎಂದು ಸಲಹೆ ನೀಡಿದರು.

ಕಾಲೇಜಿನ ಪ್ರಾಂಶುಪಾಲ ಡಾ. ಚೌಡಯ್ಯ ಕಟ್ನವಾಡಿ ಅಧ್ಯಕ್ಷತೆ ವಹಿಸಿದ್ದರು. ವಿದ್ಯಾರ್ಥಿನಿ ದಿವ್ಯ ಮತ್ತು ತಂಡದವರ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಶ್ವೇತಾ ಎಂ.ಎಸ್. ಸ್ವಾಗತಿಸಿದರು. ವಿದ್ಯಾರ್ಥಿನಿ ಶಿವಮ್ಮ ವಾರ್ಷಿಕ ವರದಿ ಮಂಡಿಸಿದರು. ಹೆಚ್.ಎಲ್.ವರ್ಷಿತ, ಜೆ.ಎಸ್.ದಿವ್ಯ ಮಾತನಾಡಿದರು. ಮುಖಂಡರಾದ ತೇಜು ಸ್ವಾಮಿ, ಡಿ.ಎಸ್.ರವಿ ಉಪಸ್ಥಿತರಿದ್ದರು.

## ಇತಿಹಾಸದಲ್ಲಿ ಈ ದಿನ

### ಜನವರಿ-08

**1815:** ಅಮೆರಿಕದ ಇತಿಹಾಸದಲ್ಲಿನ ಪ್ರಮುಖ ಯುದ್ಧವಾದ ನ್ಯೂ ಓರ್ಲಿಯನ್ಸ್ ಯುದ್ಧ ನಡೆಯಿತು.

**1918:** ಅಮೆರಿಕ ಅಧ್ಯಕ್ಷ ವುಡ್‌ರೋ ವಿಲ್ಸನ್ ಅವರು ಪ್ರಥಮ ವಿಶ್ವಯುದ್ಧದ ನಂತರದ ಶಾಂತಿಗಾಗಿ ಪ್ರಸಿದ್ಧವಾದ 14 ಅಂಶಗಳ ಘೋಷಣೆ ಮಂಡಿಸಿದರು.

ಜನನ

**1935:** ವಿಶ್ವಪ್ರಸಿದ್ಧ ಗಾಯಕ ಹಾಗೂ ನಟ ಎಲ್ವಿಸ್ ಪ್ರೆಸ್ಲಿ
**1942:** ಮಹಾನ್ ಭೌತಶಾಸ್ತ್ರಜ್ಞ ಸ್ಟೀಫನ್ ಹಾಕಿಂಗ್
**1947:** ಪ್ರಸಿದ್ಧ ಸಂಗೀತಗಾರ ಡೇವಿಡ್ ಬೋವಿ

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248